ಇ) ದಿನಾಂಕ 7.12.2004 ಹಾಗೂ 19.2.2005ರಂದು ಸರ್ಕಾರದಿಂದ ಹಣ ಬಿಡುಗಡೆಯಾಗಿರುತ್ತದೆ. 2005-06ನೇ ಸಾಲಿಗೆ ಸಂಬಂಧಿಸಿದಂತೆ ಹಣವನು ಶೀಘ್ರದಲ್ಲಿ ಬಿಡುಗಡೆಮಾಡಲಾಗುವುದು.

3708(4712): ಶ್ರೀ ಈಶ್ವರಪ್ಪ ಕೆ.ಎಸ್.9ಶಿವಮೊಗ್ಗ);
ಮಾನ್ಯ ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಶಿವಮೊಗ್ಗ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಯಾವಾಗ ಮಂಜೂರು ಮಾಡಲಾಗುವುದು;

ಇ) ಯಾವಾಗ ತರಗತಿಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಹೌದು.

ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲು ಬೇಡಿಕೆ ಇದೆ. ಆದರೆ ಆರ್ಥಿಕ ಸಂಪನ್ಮೂಲಗಳನ್ನು ಗಮನದಲ್ಲಿಟಟುಕೊಂಡು ತೀರ್ಮಾನ ಕೈಗೊಳ್ಳಬೇಕಾಗಿದೆ.

3709(4713): ಶ್ರೀ ಈಶ್ವರಪ್ಪ ಕೆ.ಎಸ್; ಮಾನ್ಯ ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಶಿವಮೊಗ್ಗ ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಶಂಕುಸ್ಥಾಪನೆಯಾಗಿದ್ದು, ಯಾವಾಗ ಕಾಮಗಾರಿ ಪ್ರಾರಂಭಿಸಲಾಗುವುದು;

ಆ) ಹಾಗಿದ್ದಲ್ಲಿ, 2006ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ತರಗತಿಗಳನ್ನು ಪ್ರಾರಂಭಿಸಲಾಗುವುದೇ;

ಇ) ಯಾವಾಗ ತರಗತಿಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಈಗಾಗಲೇ ಪ್ರಾರಂಭಿಸಲಾಗಿದೆ.

ಆ) 2006-2007ನೇ ಶೈಕ್ಷಣಿಕ ಸಾಲಿನಲ್ಲಿ ಭಾರತೀಯ ವೈದ್ಯಕೀಯ ಪರಿಷತ್ ಮತ್ತು ಭಾರತ ಸರ್ಕಾರದ ಅನುಮತಿ ಮಂಜೂರಾದಲ್ಲಿ ಪ್ರಾರಂಭಿಸಲಾಗುವುದು.